# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸುಶ್ರುತಾ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ ದಾವಣಗೆರೆ ಇಲ್ಲಿ ಹೊಸದಾಗಿ ಬಿ.ಎ.ಎಂ.ಎಸ್ ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ನಿರಾಕ್ಷೇಪಣಾ ಪತ್ರ ಸಂಖ್ಯೆ:Ayush/79/M.E(2)/2018-19, ದಿನಾಂಕ:21.09.2020.
2. ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಪ್ರಸ್ತಾವನೆ ಸಂಖ್ಯೆ:RGUHS/ACA/AFF/F/AY-92/2022-23, ದಿನಾಂಕ:23.09.2021.
3. NCISM ಇವರ ಅನುಮತಿ ಪತ್ರ ಸಂಖ್ಯೆ:4-173/2021-AY, ದಿನಾಂಕ:01.02.2022.
4. ಆಯುಕ್ತರು, ಆಯುಷ್ ಇಲಾಖೆ ಇವರ ಪತ್ರ ಸಂಖ್ಯೆ: ಆಯುಷ್/12/ಅ-(2)/ 2021-22, ದಿನಾಂಕ:22.02.2022.

* * * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರ.ಸಂ,(1)ರಲ್ಲಿ ಸುಶ್ರುತಾ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ ದಾವಣಗೆರೆ ಇಲ್ಲಿ ಹೊಸದಾಗಿ ಬಿ.ಎ.ಎಂ.ಎಸ್ ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಿ ನಮೂನೆ-4 ಅನ್ನು ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(2)ರಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು 2021-22ನೇ ಶೈಕ್ಷಣಿಕ ಸಾಲಿನಿಂದ ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಹೊಸದಾಗಿ ಬಿ.ಎ.ಎಂ.ಎಸ್ ಕೋರ್ಸ್ ಪ್ರಾರಂಭಿಸಲು ಕೆಲವೊಂದು ಷರತ್ತಿಗೊಳಪಟ್ಟು ನಮೂನೆ-5 ರಲ್ಲಿ Consent of Affiliation ಅನ್ನು ನೀಡಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ,(3)ರಲ್ಲಿ ಸದರಿ ಸಂಸ್ಥೆಗೆ NCISM ಇವರು 2021-22ನೇ ಶೈಕ್ಷಣಿಕ ಸಾಲಿನಿಂದ ಸುಶ್ರುತಾ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ, ನಂ.693, ಶ್ರೀರಾಮನಗರ ಹತ್ತಿರ, ಶ್ರೀದೇವಿ ರೈಸ್‌ಮಿಲ್ ಹಿಂಭಾಗ, ಪಾಮೇನಹಳ್ಳಿ ಕಾಲುವೆ ರಸ್ತೆ, ದಾವಣಗೆರೆ-577002 ಸಂಸ್ಥೆಗೆ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಬಿ.ಎ.ಎಂ.ಎಸ್ ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(4)ರಲ್ಲಿ ಆಯುಕ್ತರು, ಆಯುಷ್ ಇಲಾಖೆ ಇವರು ಸುಶ್ರುತಾ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ, ದಾವಣಗೆರೆ ಇವರು ಹೊಸದಾಗಿ ಬಿ.ಎ.ಎಂ.ಎಸ್ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವುದಕ್ಕೆ ಸಂಬಂಧಿಸಿದಂತೆ NCISM, ನವದೆಹಲಿ ಇವರು 2021-22ನೇ ಸಾಲಿನ ಶೈಕ್ಷಣಿಕ ಸಾಲಿನಿಂದ ಸುಶ್ರುತಾ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ, ನಂ.693, ಶ್ರೀರಾಮನಗರ ಹತ್ತಿರ, ಶ್ರೀದೇವಿ ರೈಸ್‌ಮಿಲ್ ಹಿಂಭಾಗ, ಪಾಮೇನಹಳ್ಳಿ ಕಾಲುವೆ ರಸ್ತೆ, ದಾವಣಗೆರೆ-577002 ಇವರಿಗೆ 2021-22ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಹೊಸದಾಗಿ ಪ್ರಥಮ ಬಿ.ಎ.ಎಂ.ಎಸ್. ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಿರುವ ಹಿನ್ನಲೆಯಲ್ಲಿ ಸದರಿ ಸಂಸ್ಥೆಯವರು ತಮ್ಮ ಸಂಸ್ಥೆಗೆ ಹೊಂದಿಕೊಂಡಿರುವ ಆಸ್ಪತ್ರೆಯನ್ನು L-4 (Teaching Hospital) ಬೋಧನಾ ಆಸ್ಪತ್ರೆ ಎಂದು ಕರ್ನಾಟಕ ಖಾಸಗಿ ವೈದ್ಯಕೀಯ ಸಂಶೋಧನಾ ಕಾಯ್ದೆ ಮತ್ತು ನಿಯಮಗಳಡಿಯಲ್ಲಿ ನೋಂದಣಿ ಪಡೆದು ಪ್ರಮಾಣ ಪತ್ರ ಸಲ್ಲಿಸುವ ಷರತ್ತಿಗೊಳಪಟ್ಟು ಸದರಿ ಸಂಸ್ಥೆಗೆ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯನ್ನು ನಿಗಧಿಪಡಿಸಿ 2021-22ನೇ ಶೈಕ್ಷಣಿಕ ಸಾಲಿನಿಂದ ಅನ್ವಯಿಸುವಂತೆ ವಿದ್ಯಾರ್ಥಿಗಳ ಪ್ರವೇಶಾತಿಗೆ ಅನುಮತಿ ನೀಡಿ ಆದೇಶ ಹೊರಡಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ.

SRG

ಆಯುಕ್ತರು, ಆಯುಷ್ ಇಲಾಖೆ ಇವರ ವರದಿ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಸುಶ್ರುತಾ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ, ದಾವಣಗೆರೆ ಎಂಬ ಹೆಸರಿನಲ್ಲಿ 2021-22ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಹೊಸದಾಗಿ ಬಿ.ಎ.ಎಂ.ಎಸ್. ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 130 ಪಿಟಿಡಿ 2020,**
**ಬೆಂಗಳೂರು. ದಿನಾಂಕ:26.07.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸುಶ್ರುತಾ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ, ನಂ.693, ಶ್ರೀರಾಮನಗರ ಹತ್ತಿರ, ಶ್ರೀದೇವಿ ರೈಸ್‌ಮಿಲ್ ಹಿಂಭಾಗ, ಪಾಮೇನಹಳ್ಳಿ ಕಾಲುವೆ ರಸ್ತೆ, ದಾವಣಗೆರೆ ಇವರಿಗೆ 2021-22ನೇ ಶೈಕ್ಷಣಿಕ ಸಾಲಿನಿಂದ 60 (ಅರವತ್ತು) ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಹೊಸದಾಗಿ ಬಿ.ಎ.ಎಂ.ಎಸ್. ಕೋರ್ಸ್ ಪ್ರಾರಂಭಿಸಲು **ಈ ಪ್ರಕರಣವನ್ನು ಪೂರ್ವನಿದರ್ಶನ ಪ್ರಕರಣವಾಗಿ ಪರಿಗಣಿಸದಿರುವ ಷರತ್ತಿನೊಂದಿಗೆ** ಸರ್ಕಾರದ ಅನುಮತಿ ನೀಡಲಾಗಿದೆ.

**ಮುಂದುವರೆದಂತೆ, ಸದರಿ ಸಂಸ್ಥೆಯು ಈ ಕೆಳಕಂಡ ಷರತ್ತುಗಳನ್ನು ಪಾಲಿಸತಕ್ಕದ್ದು:-**

1. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಎಲ್ಲಾ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
2. ಸಂಸ್ಥೆಗೆ ಹೊಂದಿಕೊಂಡಿರುವ ಆಸ್ಪತ್ರೆಯನ್ನು L-4 (Teaching Hospital) ಬೋಧನಾ ಆಸ್ಪತ್ರೆ ಎಂದು ಕರ್ನಾಟಕ ಖಾಸಗಿ ವೈದ್ಯಕೀಯ ಸಂಶೋಧನಾ ಕಾಯ್ದೆ ಮತ್ತು ನಿಯಮಗಳಡಿಯಲ್ಲಿ ನೋಂದಣಿ ಪಡೆದು ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮ/ಆದೇಶಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು ಮತ್ತು ಸರ್ಕಾರಿ ಕೋಟಾ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
4. NCISM ಸಂಸ್ಥೆಯು ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
8. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್‌ನ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.

PRG

9. ಸಂಸ್ಥೆಯ ಆರ್ಥಿಕ ಸ್ಥಿತಿಯನ್ನು ಆಯುಕ್ತರು, ಆಯುಷ್ ಇಲಾಖೆ, ಇವರು, ಖಚಿತಪಡಿಸಿಕೊಳ್ಳುವುದು.

10. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

SR Gorawar
26/7/2022

**(ಶೈಲಾ ಆರ್ ಗೊರವರ )**
ಸರ್ಕಾರದ ಅಧೀನ ಕಾರ್ಯದರ್ಶಿ-3,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಭಾವೈಪ ಮತ್ತು ಸಮನ್ವಯ)

**ಇವರಿಗೆ:-**

1. The Chair Person, National Commission for Indian System of Medicine, Ministry of Ayush Government of India, No.61- 65, Institutional area, Janakapuri-D Block, New Delhi-110 058.
2. ಆಯುಕ್ತರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು 560009.
3. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಬ್ಲಾಕ್, ಜಯನಗರ, ಬೆಂಗಳೂರು-41.
4. ಪ್ರಾಂಶುಪಾಲರು, ಸುಶ್ರುತಾ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ, ನಂ.693, ಶ್ರೀರಾಮನಗರ ಹತ್ತಿರ, ಶ್ರೀದೇವಿ ರೈಸ್‌ಮಿಲ್ ಹಿಂಭಾಗ, ಪಾಮೇನಹಳ್ಳಿ ಕಾಲುವೆ ರಸ್ತೆ, ದಾವಣಗೆರೆ-577002.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ. ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ. ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ. ವಿಕಾಸ ಸೌಧ, ಬೆಂಗಳೂರು.